**ಕರ್ನಾಟಕ ಸರ್ಕಾರ**

ಸಂಖ್ಯೆ:ಇಡಿ 148 ಟಿಪಿಇ 2018.

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ, 2ನೇ ಗೇಟ್ 6ನೇ ಮಹಡಿ,
ಬೆಂಗಳೂರು, ದಿನಾಂಕ: 02/11/2018.

ಇಂದ:-

ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ),
ಬೆಂಗಳೂರು-560 001.

ಇವರಿಗೆ:-

ನಿರ್ದೇಶಕರು,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು.

ಮಾನ್ಯರೆ,

ವಿಷಯ: - 2009-10ನೇ ಸಾಲಿನಲ್ಲಿ ಡಿಪ್ಲೋಮಾ ಕೋರ್ಸುಗಳಿಗೆ 1ನೇ ವರ್ಷಕ್ಕೆ ಪ್ರವೇಶ ಪಡೆದ ಹಾಗೂ 2011-2012 ಮತ್ತು 2012-13ನೇ ಸಾಲಿನಲ್ಲಿ ಡಿಪ್ಲೋಮಾ ಕೋರ್ಸುಗಳಿಗೆ ಲ್ಯಾಟರಲ್ ಎಂಟ್ರಿ ಮುಖಾಂತರ 2ನೇ ವರ್ಷಕ್ಕೆ ಪ್ರವೇಶ ಪಡೆದ ಐಟಿಇ ವಿದ್ಯಾರ್ಥಿಗಳಿಗೆ ಪರೀಕ್ಷೆಗೆ ಹಾಜರಾಗಲು ಕೊನೆಯ ಅವಕಾಶ ವಿಸ್ತರಿಸುವ ಬಗ್ಗೆ.

ಉಲ್ಲೇಖ:- ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ ರವರ ಪತ್ರ ಸಂಖ್ಯೆ: ಬಿಟಿಇ/09/ಇಸಿಎಸ್2/2017, ದಿನಾಂಕ:18.07.2018.

*******

ಮೇಲ್ಕಂಡ ವಿಷಯದ ಉಲ್ಲೇಖಿತ ಪ್ರಸ್ತಾವನೆಯನ್ನು ಪರಿಶೀಲಿಸಲಾಯಿತು. 2009-10ನೇ ಸಾಲಿನಲ್ಲಿ ಡಿಪ್ಲೋಮಾ ಕೋರ್ಸುಗಳಿಗೆ 1ನೇ ವರ್ಷಕ್ಕೆ ಪ್ರವೇಶ ಪಡೆದ ಹಾಗೂ 2011-2012 ಮತ್ತು 2012-13ನೇ ಸಾಲಿನಲ್ಲಿ ಡಿಪ್ಲೋಮಾ ಕೋರ್ಸುಗಳಿಗೆ ಲ್ಯಾಟರಲ್ ಎಂಟ್ರಿ ಮುಖಾಂತರ 2ನೇ ವರ್ಷಕ್ಕೆ ಪ್ರವೇಶ ಪಡೆದ ಐಟಿಐ ವಿದ್ಯಾರ್ಥಿಗಳು 2018-19ನೇ ಸಾಲಿನ ಏಪ್ರಿಲ್-ಮೇ ನ ಸೆಮಿಸ್ಟರ್‌ಗಳಲ್ಲಿ ಅನುತ್ತೀರ್ಣರಾಗಿರುವ ಕಾರಣ, ವಿದ್ಯಾರ್ಥಿಗಳ ಶೈಕ್ಷಣಿಕ ಭವಿಷ್ಯವು ಅಂತ್ಯವಾಗಬಾರದು ಎಂಬ ಉದ್ದೇಶದ ಮೇರೆಗೆ ಒಂದು ಬಾರಿಯ ಕ್ರಮವಾಗಿ ಈ ವಿದ್ಯಾರ್ಥಿಗಳಿಗೆ ಮಾತ್ರ ಅನ್ವಯಿಸುವಂತೆ ಇವರುಗಳಿಗೆ 2018ರ ನವೆಂಬರ್ / ಡಿಸೆಂಬರ್ ಮತ್ತು 2019ರ ಏಪ್ರಿಲ್ / ಮೇ ನಲ್ಲಿ ನಡೆಯುವ ಸೆಮಿಸ್ಟರ್ ಪರೀಕ್ಷೆಯನ್ನು ಬರೆಯಲು ಸರ್ಕಾರದ ಅನುಮತಿಯನ್ನು ನೀಡಲಾಗಿದೆ ಎಂದು ತಮಗೆ ತಿಳಿಸಲು ನಿರ್ದೇಶಿತಳಾಗಿದ್ದೇನೆ.

ತಮ್ಮ ವಿಶ್ವಾಸಿ,

2/11/18

(ಮನೋರಮ ಡಿ ಸಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ತಾಂತ್ರಿಕ).

PTO

**ಕರ್ನಾಟಕ ಸರ್ಕಾರ**
**(ತಾಂತ್ರಿಕ ಶಿಕ್ಷಣ ಇಲಾಖೆ)**

ಸಂ.ಟಿಇಇ/ 01 /ಇಎಪಿ/2018

ಕಾರ್ಯದರ್ಶಿಯವರ ಕಛೇರಿ,
ತಾಂತ್ರಿಕ ಶಿಕ್ಷಣ ಪರೀಕ್ಷಾ ಮಂಡಳಿ,
ಅರಮನೆ ರಸ್ತೆ, ಬೆಂಗಳೂರು-01.
ದಿನಾಂಕ: 3/11/2018.

**ಹಿಂಬರಹ**

ವಿಷಯ: 2009-10ನೇ ಸಾಲಿನಲ್ಲಿ ಡಿಪ್ಲೊಮಾ ಕೋರ್ಸುಗಳಿಗೆ 1ನೇ ವರ್ಷಕ್ಕೆ ಪ್ರವೇಶ ಪಡೆದ ಹಾಗೂ 2011-12 ಮತ್ತು 2012-13ನೇ ಸಾಲಿನಲ್ಲಿ ಡಿಪ್ಲೊಮಾ ಕೋರ್ಸುಗಳಿಗೆ ಲ್ಯಾಟರಲ್ ಎಂಟ್ರಿ ಮುಖಾಂತರ 2ನೇ ವರ್ಷಕ್ಕೆ ಪ್ರವೇಶ ಪಡೆದ ಐಟಿಐ ವಿದ್ಯಾರ್ಥಿಗಳಿಗೆ ಪರೀಕ್ಷೆಗೆ ಹಾಜರಾಗಲು ಕೊನೆಯ ಅವಕಾಶ ವಿಸ್ತರಿಸುವ ಕುರಿತು.

ಉಲ್ಲೇಖ: ಸರ್ಕಾರದ ಪತ್ರ ಸಂಖ್ಯೆ ಇಡಿ 148 ಟಿಪಿಇ 2018 ದಿನಾಂಕ: 2/11/2018

* * * * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖಿತ ಸರ್ಕಾರದ ಪತ್ರದ ಅನ್ವಯ 2009-10ನೇ ಸಾಲಿನಲ್ಲಿ ಡಿಪ್ಲೊಮಾ ಕೋರ್ಸುಗಳಿಗೆ 1ನೇ ವರ್ಷಕ್ಕೆ ಪ್ರವೇಶ ಪಡೆದ ಹಾಗೂ 2011-12 ಮತ್ತು 2012-13ನೇ ಸಾಲಿನಲ್ಲಿ ಡಿಪ್ಲೊಮಾ ಕೋರ್ಸುಗಳಿಗೆ ಲ್ಯಾಟರಲ್ ಎಂಟ್ರಿ ಮುಖಾಂತರ 2ನೇ ವರ್ಷಕ್ಕೆ ಪ್ರವೇಶ ಪಡೆದ ಐಟಿಐ ವಿದ್ಯಾರ್ಥಿಗಳು 2018-19ನೇ ಸಾಲಿನ ಏಪ್ರಿಲ್/ಮೇ ನ ಸೆಮಿಸ್ಟರ್‌ಗಳಲ್ಲಿ ಅನುತ್ತೀರ್ಣರಾಗಿರುವ ಕಾರಣ, ವಿದ್ಯಾರ್ಥಿಗಳ ಶೈಕ್ಷಣಿಕ ಭವಿಷ್ಯವು ಅಂತ್ಯವಾಗಬಾರದು ಎಂಬ ಉದ್ದೇಶದ ಮೇರೆಗೆ ಒಂದು ಬಾರಿಯ ಕ್ರಮವಾಗಿ ಈ ವಿದ್ಯಾರ್ಥಿಗಳಿಗೆ ಮಾತ್ರ ಅನ್ವಯಿಸುವಂತೆ ಇವರುಗಳಿಗೆ 2018ರ ನವೆಂಬರ್/ಡಿಸೆಂಬರ್ ಸೆಮಿಸ್ಟರ್ ಪರೀಕ್ಷೆ ಮತ್ತು 2019ರ ಏಪ್ರಿಲ್/ಮೇ ಸೆಮಿಸ್ಟರ್ ಪರೀಕ್ಷೆಯಗಳನ್ನು ಬರೆಯಲು ಅನುಮತಿ ನೀಡಲಾಗಿದೆ.

ಪ್ರಯುಕ್ತ ಸದರಿ ವಿದ್ಯಾರ್ಥಿಗಳಿಗೆ 2018ರ ನವೆಂಬರ್/ಡಿಸೆಂಬರ್ ಸೆಮಿಸ್ಟರ್ ಪರೀಕ್ಷೆಗೆ ದಿನಾಂಕ: 13/11/2018ರವರಗೆ ದಂಡ ರಹಿತವಾಗಿ ಪರೀಕ್ಷಾ ಶುಲ್ಕ ಪಾವತಿಸಲು ಅನುಮತಿ ನೀಡಲಾಗಿದೆ.

ಕಾರ್ಯದರ್ಶಿ.

ಇವರಿಗೆ:
ರಾಜ್ಯದ ಎಲ್ಲಾ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳಿಗೆ - ಮುಂದಿನ ಕ್ರಮಕ್ಕಾಗಿ.

ಪ್ರತಿ: ಇ – ಆಡಳಿತ – ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.